ಕರ್ನಾಟಕ ಸರ್ಕಾರ

**ತಾಂತ್ರಿಕ ಶಿಕ್ಷಣ ಇಲಾಖೆ**

**ನಿರ್ದೇಶಕರವರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು – 560 001**

---

ನಂ:ಡಿಟಿಇ/01/ಎಸ್‌ಸಿಹೆಚ್(2) 2018–19 ದಿನಾಂಕ: 23–11–2018.

**–:: ಸುತ್ತೋಲೆ ::–**

**ವಿಷಯ :** 2018–19ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಶೇ.60 ರಿಂದ 74.99 ಹಾಗೂ ಶೇ.75 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮಂಜೂರು ಮಾಡುವ ಬಗ್ಗೆ.

**ಉಲ್ಲೇಖ :** ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಮೈಸೂರು ಇವರ ಪತ್ರ ಸಂಖ್ಯೆ: ಜಂನಿ:ಸಕಇ:ಶಿಕ್ಷಣ:ಸಿಆರ್06:2018–19, ದಿನಾಂಕ :30.10.2018.

*****

ಉಲ್ಲೇಖದ ಪತ್ರದಂತೆ 2018–19ನೇ ಸಾಲಿನಲ್ಲಿ ಮೈಸೂರು ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಶೇ.60 ರಿಂದ 74.99 ಹಾಗೂ ಶೇ.75 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮಂಜೂರು ಮಾಡುವ ಯೋಜನೆಯನ್ನು ಸಮಾಜ ಕಲ್ಯಾಣ ಇಲಾಖಾವತಿಯಿಂದ ಅನುಷ್ಠಾನಗೊಳುಸುತ್ತಿದ್ದು, ಆನ್‌ಲೈನ್ ಮುಖೇನ ನೋಂದಣಿ ಪ್ರಕ್ರಿಯೆಯು ಪ್ರಾರಂಭವಾಗಿರುತ್ತದೆ.

ಮೈಸೂರು ಜಿಲ್ಲೆಯಲ್ಲಿ ಬರುವ ಎಲ್ಲಾ ಪಾಲಿಟೆಕ್ನಿಕ್‌ಗಳಲ್ಲಿ ಈಗಾಗಲೇ ಪ್ರಥಮ ವರ್ಷಕ್ಕೆ ಪ್ರವೇಶಾತಿ ಪಡೆದು ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಪಡೆಯಲು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ **sw.kar.nic.in** ನಲ್ಲಿ **sslc prize money** ಶೀರ್ಷಿಕೆಯಡಿಯಲ್ಲಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ತಿಳಿಸುವಂತೆ ಕ್ರಮವಹಿಸಲು ಮೈಸೂರು ಜಿಲ್ಲೆಯ ಎಲ್ಲಾ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರಿಗೆ ಈ ಮೂಲಕ ಸೂಚಿಸಲಾಗಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560 001

ಇವರಿಗೆ,

1. ಪ್ರಾಂಶುಪಾಲರು, ಮೈಸೂರು ಜಿಲ್ಲೆಯ ಎಲ್ಲಾ ಪಾಲಿಟೆಕ್ನಿಕ್ ಕಾಲೇಜುಗಳ ಗಮನಕ್ಕೆ.
2. ಸಂಯೋಜನಾಧಿಕಾರಿಗಳು, ಇ–ಆಡಳಿತ ವಿಭಾಗ (ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು)